PW-1

ಸಾಕ್ಷಿಯನ್ನು ದಿನಾಂಕ 20.01.2025 ರಂದು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.

**ಪಾಟೀ ಸವಾಲುಃ ಎದುರುದಾರರ ಪರ ವಕೀಲರಾದ ಶ್ರೀ ಎಂ.ಎನ್.ಎಸ್. ವಕೀಲರಿಂದಃ**

ಅಸಲು ದಾವಾ ಸಂಖ್ಯೆ 209/2021 ನೇದ್ದನ್ನು ಪ್ರಧಾನ ಸಿವಿಲ್ ನ್ಯಾಯಾಲಯದಲ್ಲಿ ನನ್ನ ವಿರುದ್ಧ ದಾಖಲುಡಿಸಿರುವ ಬಗ್ಗೆ ಮಾಹಿತಿ ಇತ್ತು ಎಂದರೆ ಸರಿಯಲ್ಲ. ನನಗೆ ಅಸಲು ದಾವಾ ಸಂಖ್ಯೆ 209/2021 ನೇದ್ದರಲ್ಲಿ ಸಮನ್ಸ್ ಜಾರಿಯಾಗಿತ್ತು ಎಂದರೆ ಸರಿ. ಸಾಕ್ಷಿಯು ಆ ಸಮಯದಲ್ಲಿ ನನಗೆ ಹುಷಾರು ಇರದೇ ಇರುವುದರಿಂದ ಹಾಜರಾಗಿರುವುದಿಲ್ಲ ಎಂದು ನುಡಿಯುತ್ತಾರೆ. ನಮ್ಮ ವಿರುದ್ಧ ಡಿಕ್ರಿಯಾದ ಬಗ್ಗೆ ಗೊತ್ತಾದ ನಂತರ ಈ ಮೇಲ್ಮನವಿ ಸಲ್ಲಿಸಿರುತ್ತೇನೆ. ಜಾರಿ ಪ್ರಕರಣದಲ್ಲಿ ನನ್ನನ್ನು ದಸ್ತಗಿರಿ ಮಾಡಿ ನ್ಯಾಯಾಲಯದ ಮುಂದೆ ಹಾಜರುಪಡಿಸಿದ್ದರು ಎಂದರೆ ಸರಿ. ಆ ಪ್ರಕರಣದಲ್ಲಿ ಒಟ್ಟು ರೂ. 50,000/- ಗಳನ್ನು ನೀಡಿ ಉಳಿದ ಹಣವನ್ನು ನೀಡಲು 6 ತಿಂಗಳ ಕಾಲಾವಕಾಶ ಪಡೆದಿದ್ದೆ ಎಂದರೆ ಸರಿ. ನನ್ನ ಆರೋಗ್ಯ ಸರಿ ಇದ್ದಿರಲಿಲ್ಲ ಎಂದು ತೋರಿಸಲು ದಾಖಲೆಗಳನ್ನು ಹಾಜರುಪಡಿಸಿಲ್ಲ ಎಂದರೆ ಸರಿಯಲ್ಲ. ನಾನು ನ್ಯಾಯಾಲಯಕ್ಕೆ ಹಾಜರಾಗದೆ ಇದ್ದಿದ್ದರಿಂದ ಹುಷಾರಿಲ್ಲ ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಎದುರುದಾರರಿಗೆ ತೊಂದರೆ ಕೊಡಬೇಕು ಎಂಬ ಉದ್ದೇಶದಿಂದ ಈ ಮೇಲ್ಮನವಿ ಸಲ್ಲಿಸಿದ್ದೇನೆ ಎಂದರೆ ಸರಿಯಲ್ಲ.

ಮರು ವಿಚಾರಣೆಃ ಇಲ್ಲ.

(ತೆರದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು)

ಓ ಹೇ ಕೇಳಿ ಸರಿ ಇದೆ

ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್

ಗುಂಡ್ಲುಪೇಟೆ